ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ ಕೊಪ್ಪಳ ಜಿಲ್ಲೆ – ಕೊಪ್ಪಳ

# 2019 ನೇ ಸಾಲಿಗಾಗಿ

## ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ

## ಜಿಲ್ಲಾಧಿಕಾರಿಗಳ ಕಾರ್ಯಾಲಯ

## ಜಿಲ್ಲಾ ಆಡಳಿತ ಭವನ ಕೊಪ್ಪಳ ಜಿಲ್ಲೆ

**********

## ಗ್ರಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ – 2019

## ಕೊಪ್ಪಳ ಜಿಲ್ಲೆ ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆ ವೇಳಾ ಪಟ್ಟಿ

**[ Calender of Events]**

| ಕ್ರ.ಸಂ | ವಿ ವ ರ | ದಿ ನಾ ಂ ಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ | 24/12/2019 |
| 1 | ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ | 06/01/2020 |
| 2 | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 05/02/2020 |
| 3 | ಜಿಲ್ಲಾಧಿಕಾರಿಗಳು ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 20/02/2020 |
| 4 | ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕ | 21/02/2020 |
| 5 | ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ | 28/02/2020 |
| 6 | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರ್ ಆಗಬೇಕಾದ ದಿನಾಂಕ ಮತ್ತು ಸಮಯ | 16/03/2020 ಬೆಳಿಗ್ಗೆ:11.00 ಗಂಟೆಗೆ |
| 7 | ಜಿಲ್ಲಾಧಿಕಾರಿಗಳ ಕಚೇರಿಯಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 01/04/2020 |
| 8 | ಜಿಲ್ಲಾಧಿಕಾರಿಗಳ ಕಚೇರಿಯಿಂದ ಪ್ರಕಟಿಸಲಾದ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬೇಕಾದ ದಿನಾಂಕ | 02/04/2020 ರಿಂದ 09/04/2020 |
| 7 | ಜಿಲ್ಲಾಧಿಕಾರಿಗಳ ಕಛೇರಿಯಿಂದ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 30/04/2020 |
| 8 | ವೆಬ್ ಸೈಟ್ ವಿಳಾಸ | http://koppal-va.kar.nic.in |
| 9 | ಸ್ಪಷ್ಟೀಕರಣ/ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | 08539-225001<br>05359-220854 |

ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು ಕೊಪ್ಪಳ ಜಿಲ್ಲೆ ಕೊಪ್ಪಳ

ಕರ್ನಾಟಕ ಸರ್ಕಾರ
# ಜಿಲ್ಲಾಧಿಕಾರಿಗಳ ಕಾರ್ಯಾಲಯ ಕೊಪ್ಪಳ
ದೂರವಾಣಿ : 08539 – 220844 ಫ್ಯಾಕ್ಸ್ : 221235 ಇ-ಮೇಲ್ : deo.koppal@gmail.com

ಸಂಖ್ಯೆ:ಕಂದಾಯ/ಸಿಬ್ಬಂದಿ/157/2019-20/ಇ-36364 ದಿನಾಂಕ:24/12/2019

## :: ಅಧಿಸೂಚನೆ ::

ಕೊಪ್ಪಳ ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ [22] ಗ್ರಾಮಲೆಕ್ಕಾಧಿಕಾರಿ ಹುದ್ದೆಗಳನ್ನು ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬಾರ್ಡಿನೇಟ್ ಬ್ರಾಂಚ್) (ಕೇಡರ್ & ರಿಕ್ರೂಟ್‌ಮೆಂಟ್) (ತಿದ್ದುಪಡಿ) ನಿಯಮಗಳು 2008ರ ನಿಯಮ 2 ರ ಅನ್ವಯ ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಸುತ್ತೋಲೆ ಸಂಖ್ಯೆ/ಕಂಇ/299/ಬಿಎಸ್‌ಸಿ/2006 ದಿನಾಂಕ 03/02/2009ರಲ್ಲಿ ಹಾಗೂ ಸರ್ಕಾರದ ಪತ್ರ ಸಂಖ್ಯೆ:ಕಂಇ/04/ಬಿ.ಎಸ್.ಸಿ./2011 ದಿನಾಂಕ:25/02/2011ರಲ್ಲಿ ಅನುಮೋದನೆ ನೀಡಿದೆ. ಕಾರಣ ಕೊಪ್ಪಳ ಜಿಲ್ಲೆ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಅಹ್ವಾನಿಸಲಾಗಿದೆ.

1) ಖಾಲಿ ಇರುವ ಒಟ್ಟು ಗ್ರಾಮಲೆಕ್ಕಾಧಿಕಾರಿ ಹುದ್ದೆಗಳ ಸಂಖ್ಯೆ : 22
2) ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ : 20
3) ಮಿಕ್ಕುಳಿದ ವೃಂದದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ : 02

### ಖಾಲಿ ಉಳಿದ ಹುದ್ದೆಗಳ ಸಂಖ್ಯೆ-01

### ಸ್ಥಳೀಯ ವೃಂದ (lOCAL CADRE) -01 ಹುದ್ದೆ

| ಕ್ರ ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಸಾಮಾನ್ಯ | – | – | – | – | 01 | – | – | 01 |
| | ಒಟ್ಟು | – | – | – | – | 01 | – | – | 01 |

**ಸ್ಥಳೀಯ ವೃಂದದಲ್ಲಿ (lOCAL CADRE) ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ- 19**
**(ರೋಸ್ಟರ್ ಬಿಂದು 42 ರಿಂದ 62 ರ ವರೆಗೆ-2ನೇ ಸೈಕಲ್)**
**(ರೋಸ್ಟರ್ ಬಿಂದು 43 ಮತ್ತು 61ನ್ನು ಸರಿದೂಗಿಸಲಾಗಿದೆ)**

| ಕ್ರ ಸಂ | ವರ್ಗೀಕರಣದ ವಿವರ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪ.ಜಾ | - | 02 | - | - | 01 | - | - | 03 |
| 2 | ಪ.ಪಂ | - | - | - | - | - | - | - | - |
| 3 | ಪ್ರ.ವರ್ಗ-1 | - | 01 | - | - | - | - | - | 01 |
| 4 | ಪ್ರವರ್ಗ-2ಎ | - | 01 | 01 | - | - | 01 | - | 03 |
| 5 | ಪ್ರವರ್ಗ-2 ಬಿ | - | - | - | - | - | - | - | - |
| 6 | ಪ್ರ.ವರ್ಗ-3ಎ | - | - | 01 | - | - | - | - | 01 |
| 7 | ಪ್ರವರ್ಗ-3ಬಿ | - | - | - | - | - | - | - | - |
| 8 | ಸಾಮಾನ್ಯ | 02 | 03 | 03 | 01 | 01 | 01 | - | 11 |
| | ಒಟ್ಟು | 02 | 07 | 05 | 01 | 02 | 02 | - | 19 |

**ಖಾಲಿ ಉಳಿದ ಹುದ್ದೆಗಳ ಸಂಖ್ಯೆ-02**

**ಮಿಕ್ಕುಳಿದ ವೃಂದ (RESIDUAL CADRE) -02 ಹುದ್ದೆಗಳು**

| ಕ್ರ ಸಂ | ವರ್ಗೀಕರಣದ ವಿವರ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪ್ರವರ್ಗ-2ಎ | 01 | - | - | - | - | - | - | 01 |
| 2 | ಸಾಮಾನ್ಯ | - | - | 01 | - | - | - | - | 01 |
| | ಒಟ್ಟು | 01 | - | 01 | - | - | - | - | 02 |

**1. ಅರ್ಜಿ ಸಲ್ಲಿಸುವ ವಿಧಾನ:-** ಅರ್ಜಿಗಳನ್ನು ಆನ್-ಲೈನ್ [ On line ] [ಎಲೆಕ್ಟ್ರಾನಿಕ್ ಮಾರ್ಗ] ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

**2.ಅರ್ಜಿ ಶುಲ್ಕ:-**

| | | | |
|---|---|---|---|
| 1 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಪ್ರವರ್ಗ-1 | ರೂ.200 | ಬ್ಯಾಂಕ ಶುಲ್ಕವನ್ನು ಅಭ್ಯರ್ಥಿಗಳು ಪ್ರತ್ಯೇಕವಾಗಿ ಭರಿಸತಕ್ಕದ್ದು. |
| 2 | 2ಎ, 2ಬಿ, 3ಎ, 3ಬಿ ವರ್ಗಕ್ಕೆ | ರೂ.300 | |
| 3 | ಸಾಮಾನ್ಯ ವರ್ಗ | ರೂ.400 | |

3. ಆನ್-ಲೈನ್ [ On line ] [ಎಲೆಕ್ಟ್ರಾನಿಕ್ ಮಾರ್ಗ] ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:-

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://koppal-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು ಹಾಗೂ ಇತ್ತೀಚಿನ ಭಾವ ಚಿತ್ರವನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು. ನಂತರ ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ [ Reference Number] ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ [ Acknowledgement Slip] ಮತ್ತು ದ್ವಿ ಪ್ರತಿ ಚಲನ್ ಅನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ಅನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಟ್ರಜರಿ ಶಾಖೆ ಕೊಪ್ಪಳದಲ್ಲಿ ಜಮಾ ಆಗುವಂತೆ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್ ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕ 16/03/2020ರಂದು ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ:12/02/2019 ಆಗಿರುತ್ತದೆ. ನಿಗದಿತ ಅರ್ಜಿ ಶುಲ್ಕದೊಂದಿಗೆ ಬ್ಯಾಂಕ್ ಶುಲ್ಕವನ್ನು ಪ್ರತ್ಯೇಕವಾಗಿ ಭರಿಸತಕ್ಕದ್ದು. ನಗದು/ಡಿ.ಡಿ./ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 05/02/2020ರ ಒಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.

1. ಅರ್ಜಿಗಳನ್ನು ದಿನಾಂಕ: 06/01/2020 ರಿಂದ 05/02/2020 ರ ಒಳಗಾಗಿ ಸಲ್ಲಿಸತಕ್ಕದ್ದು.

2. ಅರ್ಜಿ ಶುಲ್ಕವನ್ನು ದಿನಾಂಕ: 06/01/2020 ರಿಂದ 12/02/2020 ರ ವರೆಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಟ್ರಜರಿ ಶಾಖೆ ಕೊಪ್ಪಳ Power Gain A/c No:37236560697 IFSC Code No: SBIN0020968 ಇದಕ್ಕೆ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು. ಹಾಗೂ ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಮೂಲಕ ತಂತ್ರಾಂಶದ ಸೂಚನೆಯನ್ನು ಪಾಲಿಸಿ ಸ್ಕ್ಯಾನ ಮಾಡಿದ ಚಲನ್ (ಬ್ಯಾಂಕಿನಲ್ಲಿ ಅರ್ಜಿ ಶುಲ್ಕ ಸಂದಾಯ ಮಾಡಿ ಬ್ಯಾಂಕ ಮೋಹರು ಹಾಕಲಾದ ಚಲನ್) ಅಪ್‌ಲೋಡ್ (Uploading Challan Option) ಮಾಡತಕ್ಕದ್ದು. ಇದು ಅಭ್ಯರ್ಥಿಯ ಜವಾಬ್ದಾರಿಯಾಗಿರುತ್ತದೆ. (ಅರ್ಜಿ ಶುಲ್ಕ ಪಾವತಿಸಿರುವ ಚಲನ್ ಅನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವುದು ಕಡ್ಡಾಯಗೊಳಿಸಲಾಗಿದೆ.

3. **ಅರ್ಹತಾ ಷರತ್ತುಗಳು:-**

- ಭಾರತೀಯ ನಾಗರೀಕನಾಗಿರತಕ್ಕದ್ದು.
- ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.
- ಅಭ್ಯರ್ಥಿಯು ಈ ಹಿಂದೆ ಯಾವುದೇ ಸರ್ಕಾರದ ಸೇವೆಯಿಂದ ವಜಾಗೊಂಡಿರಬಾರದು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ ಮತ್ತು ನೇಮಕಾತಿ ಪ್ರಾಧಿಕಾರವು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮುದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

4. ಅನುಬಂಧದಲ್ಲಿ ತೋರಿಸಿರುವ ಖಾಲಿಯಿರುವ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಪರಿಷ್ಕರಣೆಗೆ ಒಳಪಟ್ಟಿರುತ್ತದೆ. ಮುಂದಿನ ದಿನಗಳಲ್ಲಿ ಹುದ್ದೆಗಳ ಸಂಖ್ಯೆ ಹೆಚ್ಚು ಅಥವಾ ಕಡಿಮೆ ಆದಲ್ಲಿ ಸದರಿ ಅಧಿಸೂಚನೆಗೆ ಅರ್ಜಿ ಸಲ್ಲಿಸಿದವರ ಪೈಕಿ ನಿಯಮಾನುಸಾರ ಪರಿಗಣಿಸಲಾಗುವುದು.

5. **ಶೈಕ್ಷಣಿಕ ವಿದ್ಯಾರ್ಹತೆ :-**

ಅ] ದ್ವಿತೀಯ ಪಿ.ಯು.ಸಿ. ಪರೀಕ್ಷೆ ಅಥವಾ ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಷನ್ (CBSE) ಅಥವಾ ಐ.ಸಿ.ಎಸ್.ಇ (ICSE) ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸಿರುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು. ಈ ವಿದ್ಯಾರ್ಹತೆ ಹೊರತುಪಡಿಸಿ ಇನ್ನಿತರ ಯಾವುದೇ ತತ್ಸಮಾನ ವಿದ್ಯಾರ್ಹತೆ ಅಥವಾ ಮುಕ್ತ ವಿದ್ಯಾಲಯದಿಂದ ನೀಡಲಾದ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದಿಲ್ಲ.

ಆ] ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

6. **ವೇತನ ಶ್ರೇಣಿ:-** ರೂ.21400-500-22400-550-24600-600-27000-650-29600-750-32600-850-36000-950-39800-1100-42000

7. **ವಯೋಮಿತಿ:-** ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 05/02/2020 ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| ಕ್ರ.ಸಂ | ವಿ ವ ರ | ಕನಿಷ್ಠ | ಗರಿಷ್ಠ |
|---|---|---|---|
| 1 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರ.ವರ್ಗ-1 | 18 | 40 |
| 2 | ಪ್ರ.ವರ್ಗ - 2ಎ. 2ಬಿ. 3ಎ. 3ಬಿ | 18 | 38 |
| 3 | ಸಾಮಾನ್ಯ ವರ್ಗದವರಿಗೆ | 18 | 35 |

ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ [ಟಿ.ಸಿ] ಅಥವಾ ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ.ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ] 1977 ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ] 1977 ರ ನಿಯಮಾವಳಿಗಳ ನಿಯಮ 6 ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

- ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು, ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ [ಹತ್ತು] ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
- [ಬಿ] ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

- [ಸಿ] ಪೂರ್ಣಾವಧಿ ಕೆಡೆಟ್ ಇನ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರ್ (ಕ್ಯಾಡೆಟ್ ಪರಿವೀಕ್ಷಕ) ನಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು
- ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್‌ಪೆಕ್ಟರ್ (ಗ್ರಾಮ ಸಮೂಹ ಪರಿಶೀಲಕನಾಗಿ) ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯು ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್ಸ್‌ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.
- ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು
- ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
- ಅಭ್ಯರ್ಥಿ ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳು
- ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

8. **<u>ಅನುಚ್ಛೇದ 371(ಜೆ)ರಂತೆ ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:</u>**

ಅ] ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ, ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 'ಅನುಭಂಧ-ಎ' ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

ಆ] ಸ್ಥಳೀಯ ಅಭ್ಯರ್ಥಿಗಳು ಸ್ಥಳೀಯ ವೃಂದದಲ್ಲಿ ಆಯ್ಕೆಯಾಗದೇ ಒಂದು ವೇಳೆ ಮೆರಿಟ್ ಆಧಾರದ ಮೇಲೆ ಸ್ಥಳಿಯೇತರ ವೃಂದದಲ್ಲಿ ಆಯ್ಕೆಯಾಗುವ ಅವಕಾಶವಿದ್ದಲ್ಲಿ, ತಮ್ಮ ಒಪ್ಪಿಗೆಯನ್ನು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪ್ರತ್ಯೇಕವಾಗಿ ನಮೂದಿಸತಕ್ಕದ್ದು. ಹೀಗೆ ಸ್ಥಳಿಯೇತರ ವೃಂದದಲ್ಲಿ ಆಯ್ಕೆಯಾಗುವ ಸ್ಥಳೀಯ ಅಭ್ಯರ್ಥಿಗಳು ತಮ್ಮ ಸಂಪೂರ್ಣ ಸೇವೆಯನ್ನು ಸ್ಥಳೀಯೇತರ ವೃಂದದಲ್ಲಿ ಮುಂದುವರೆಸಬೇಕಾಗಿರುತ್ತದೆ.

**9. ಸರ್ಕಾರಿ ಸೇವೆಯಲ್ಲಿರುವ ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವರ್ಗಾವಣೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಸರ್ಕಾರಿ ಸೇವೆಯಲ್ಲಿರುವ ನೌಕರರು ತಮ್ಮ ಸ್ವ ಸೇವಾ ಪುಸ್ತಕದಲ್ಲಿ ದಿನಾಂಕ 01/01/2013ಕ್ಕಿಂತ ಮುಂಚಿತ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂಥೆ ಹೈದ್ರಾಬಾದ್ ಕರ್ನಾಟಕ ಪ್ರದೇಶದಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ತಮ್ಮ ಕಚೇರಿ ಮುಖ್ಯಸ್ಥರಿಂದ ಸ್ವ-ಗ್ರಾಮ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿತಕ್ಕದ್ದು,

**10. ಸೇವಾನಿರತ ಅಭ್ಯರ್ಥಿಗಳು:**

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 11ರನ್ವಯ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಗ್ರಾಮಲೆಕ್ಕಾಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು ಇಚ್ಚಿಸಿದ್ದಲ್ಲಿ ಅವರ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ಅನುಮತಿಯನ್ನು ಪಡೆದು, ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಈ ನಿರಾಕ್ಷೇಪಣಾ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ತಪ್ಪದೆ ಪರಿಶೀಲನೆಗೆ ಹಾಜರುಪಡಿಸಬೇಕು.

**11. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು**

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ತಹಶೀಲ್ದಾರ್ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿಗಳಿಂದ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

1. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ – ಡಿ ರಲ್ಲಿ [ ಅನುಭಂದ-1]
2. ಪ್ರ.ವರ್ಗ-1 ರ ಅಭ್ಯರ್ಥಿಗಳು ನಮೂನೆ ' ಇ ' ನಲ್ಲಿ [ ಅನುಬಂಧ-2]
3. ಪ್ರ.ವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ ' ಎಫ್ ' ನಲ್ಲಿ [ಅನುಬಂಧ-3] ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:31/01/2020 ರ ಒಳಗೆ ಅರ್ಹತೆಯನ್ನು ಪಡೆದಿರಬೇಕು.
4. ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, [ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

**12. ಗ್ರಾಮೀಣ ಅಭ್ಯರ್ಥಿ:-**

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.
2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟು ಕೊಂಡಿರತಕ್ಕದ್ದು.

**ಸೂಚನೆ:-** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡಿದಿರತಕ್ಕದ್ದು.

**13. ಕನ್ನಡ ಮಾಧ್ಯಮ ಅಭ್ಯರ್ಥಿ:-**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡಿದಿರತಕ್ಕದ್ದು.

**14. ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದು.

**15. ಮಾಜಿ ಸೈನಿಕ ಮೀಸಲಾತಿ ಬಗ್ಗೆ:**

ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನೀಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.

**16.ಅಂಗವಿಕಲರ ಮೀಸಲಾತಿ ಬಗ್ಗೆ:-**

ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ನಿಯಮ 9[1-ಎ] ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/128/ಸೆನೆನಿ/2006 ದಿನಾಂಕ:1.8.2009 ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/52/ಎಸ್.ಎಸ್.ಆರ್/99 ದಿನಾಂಕ:29-11-2002 ಮತ್ತು ಸರಕಾರದ ಅಧಿಸೂಚನೆ ಸಂಖ್ಯೆ/ಡಿಪಿಎಆರ್/54/ಎಸ್ಆರ್‌ಪಿ/2012 ದಿನಾಂಕ 23/06/2012 ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1. ಕುಷ್ಟ ರೋಗದಿಂದ ಗುಣಮುಖರಾದವರು [ Leprosy cured]
2. ಶ್ರವಣ ದೋಷವುಳ್ಳವರು [Hearing impaired]
3. ಮಾನಸಿಕ ಅಸ್ವಸ್ಥತೆ [Mentally ill ]
4. ದೈಹಿತ ಅಂಗವಿಕಲತೆ ಉಳ್ಳವರು [Locomotor Disability]

ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ/115/ಸೆನೆನಿ/2005 ದಿನಾಂಕ:19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

**ಸೂಚನೆ:-** ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: 05/02/2020 ರೊಳಗೆ ಅರ್ಹತೆಯನ್ನು ಪಡೆದಿರಬೇಕು. ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಸ್ಥಾನ ಪಡೆದ ಅಭ್ಯರ್ಥಿಗಳು ಮಾತ್ರ ನಿಗದಿತ ದಿನಾಂಕ: 16/03/2020 ರಂದು ಪೂರ್ವಾಹ್ನ 11.00 ಗಂಟೆಗೆ ನೇಮಕಾತಿ ಪ್ರಾಧಿಕಾರದ ಎದುರು [ ಕೊಪ್ಪಳ ಜಿಲ್ಲಾ ಆಡಳಿತ ಭವನ ಆಡಿಟೋರಿಯಂ ಹಾಲ್ ] ಸಂಬಂಧಪಪಟ್ಟ ಎಲ್ಲಾ ಮೂಲ ಪ್ರಮಾಣ ಪತ್ರಗಳನ್ನು ತಪ್ಪದೆ ಹಾಜರ್ ಪಡಿಸತಕ್ಕದ್ದು. ಮೂಲ ಪ್ರಮಾಣ ಪತ್ರಗಳನ್ನು ಹಾಜರ್ ಪಡಿಸದಿರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆ ನೀಡದೇ ತಿರಸ್ಕೃತಗೊಳಿಸಲಾಗುವುದು.

**17. ಆಯ್ಕೆ ವಿಧಾನ:-**

ಕರ್ನಾಟಕ ಜನರಲ್ ಸರ್ವೀಸಸ್ [[Revenue Subordinate Branch] [Cadre & Recruitment] [ತಿದ್ದುಪಡಿ] ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ದ್ವಿತೀಯ ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ [On merit] ಆಧಾರದ ಮೇಲೆ ಆಯಾ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 20/02/2020 ರಂದು ಪ್ರಕಟಿಸಲಾಗುವುದು.

**18. ಪ್ರಮುಖ ಸೂಚನೆಗಳು:-**

ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ದಿನಾಂಕ:16/03/2020 ರಂದು ಪರಿಶೀಲನೆಗೆ ಹಾಜರ್ ಪಡಿಸತಕ್ಕದ್ದು.

ಅ] ದ್ವಿತೀಯ ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯ ಅಂಕ ಪಟ್ಟಿ ಪ್ರಮಾಣ ಪತ್ರ.

ಆ] ಹುಟ್ಟಿದ ದಿನಾಂಕದ ಪ್ರಮಾಣ ಪತ್ರ [ಎಸ್.ಎಸ್.ಎಲ್.ಸಿ/ಟಿ.ಸಿ. ಅಥವಾ ಕ್ಯುಮುಲೇಟಿವ್ ರೆಕಾರ್ಡ್]

ಇ] ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿ ಇರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು [ NoObjection Certificate] ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು.

ಈ] ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ [ಅನುಬಂಧ-1 ನಮೂನೆ 'ಡಿ '] ಮತ್ತು ಪ್ರ.ವರ್ಗ-1 [ಅನುಬಂಧ-2 ನಮೂನೆ 'ಇ'] ಹಾಗೂ ಪ್ರ ವರ್ಗ-2ಎ, 2ಬಿ, 3ಎ, 3ಬಿ [ ಅನುಬಂಧ-3 ನಮೂನೆ - ಎಫ್ ] ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು

ಉ] ಯೋಜನಾ ನಿರಾಶ್ರಿತ ಕುಟುಂಬದ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಊ] ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ

ಋ] ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ

ೠ] ಸೈನಿಕ ಸೇವೆಯಿಂದ ಬಿಡುಗಡೆಯಾದ /ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ ಮತ್ತು ಪಿಂಚಣಿ ಪಡೆಯುತ್ತಿರುವ ದಾಖಲೆಯ ಪ್ರತಿ, ಗುರುತಿನ ಚೀಟಿ.

**19] ಸಾಮಾನ್ಯ ಸೂಚನೆಗಳು:-**

1. ನೈತಿಕ ದುರ್ನಡೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
2. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ
4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್ ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.
5. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
6. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
7. ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.
8. ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಜಿಲ್ಲಾಧಿಕಾರಿಗಳು ಕೊಪ್ಪಳ ಕಛೇರಿಯ ಅಧಿಕೃತ ವೆಬ್ ಸೈಟ್.http://koppal-va.kar.nic.inರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: 08539-225001, 220584 ರಲ್ಲಿ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು.

[ ಪಿ ಸುನೀಲ್‌ಕುಮಾರ ] ಭಾ.ಆ.ಸೇ
ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು ಕೊಪ್ಪಳ ಜಿಲ್ಲೆ ಕೊಪ್ಪಳ

ಸಂಕಲನಾಧಿಕಾರಿ, ಸರಕಾರಿ ಕೇಂದ್ರ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ ಬೆಂಗಳೂರು-560059 ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು ಕೊಪ್ಪಳ ಇವರಿಗೆ ಒದಗಿಸಲು ಕೋರಲಾಗಿದೆ.

ಪ್ರತಿಯನ್ನು ಈ ಕೆಳಕಂಡ ಅಧಿಕಾರಿಗಳಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.

1) ಮಾನ್ಯ ಸರಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಬೆಂಗಳೂರು
2) ಮಾನ್ಯ ಸರಕಾರದ ಪ್ರಧಾನ ಕಾರ್ಯದರ್ಶಿಗಳು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಹೈದ್ರಾಬಾದ- ಕರ್ನಾಟಕ ವಿಶೇಷ ಕೋಶ) ವಿಧಾನಸೌಧ ಬೆಂಗಳೂರು
3) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ [ಸೇವೆಗಳು] ಬಹುಮಹಡಿಗಳ ಕಟ್ಟಡ ಬೆಂಗಳೂರು.
4) ಮಾನ್ಯ ಪ್ರಾದೇಶಿಕ ಆಯುಕ್ತರು ಕಲಬುರಗಿ ವಿಭಾಗ ಕಲಬುರಗಿ

ಪ್ರತಿಯನ್ನು ಈ ಕೆಳಕಂಡ ಅಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6) ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಕೊಪ್ಪಳ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7) ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕೊಪ್ಪಳ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8) ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕೊಪ್ಪಳ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
9) ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಪ್ಪಳ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
10) ಸಹಾಯಕ ಆಯುಕ್ತರು ಕೊಪ್ಪಳ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
11) ತಹಶೀಲ್ದಾರ್ ಕೊಪ್ಪಳ/ಯಲಬುರ್ಗಾ/ಕುಕನೂರು/ಕುಷ್ಟಗಿ/ಗಂಗಾವತಿ/ಕನಕಗಿರಿ/ಕಾರಟಗಿ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
12) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ
13) ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.